# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಛೇರಿ, ಕೊಡಗು, ಮಡಿಕೇರಿ.

## ಅಧಿಸೂಚನೆ

ದಿನಾಂಕಃ 28ನೇ ಜುಲೈ 2017

ವಿಷಯಃ- ನವ ಕಾನೂನು ಪದವೀಧರರಿಗೆ 2017-18ನೇ ಸಾಲಿನ ಪ್ರೋತ್ಸಾಹ ಧನ ನೀಡುವ ಯೋಜನೆಯ ಫಲಾನುಭವಿಗಳನ್ನು ಜಿಲ್ಲಾ ಮಟ್ಟದ ಸಮಿತಿಯಲ್ಲಿ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖಃ- 1. ಕರ್ನಾಟಕ ಸರ್ಕಾರದ ನಡಾವಳಿಯ ಸರ್ಕಾರಿ ಆದೇಶ ಸಂಃಲಾ 88 ಎಲ್ಎಡಿ 2017, ಬೆಂಗಳೂರು, ದಿಃ22.07.2017.

2. ಕಛೇರಿ ಟಿಪ್ಪಣಿಯ ಮೇಲಿನ ಆದೇಶದ ದಿಃ 28.07.2017.

✠✠✠✠

ಉಲ್ಲೇಖ-1 ರಂತೆ ನವ ಕಾನೂನು ಪದವೀಧರರಿಗೆ ಪ್ರೋತ್ಸಾಹ ಧನ ನೀಡುವ ಯೋಜನೆಗೆ 2017-18ನೇ ಸಾಲಿನಲ್ಲಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿ ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತ್ವರಿತವಾಗಿ ತಲುಪಿಸುವ ಉದ್ದೇಶದಿಂದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

ಆದ್ದರಿಂದ ಅರ್ಹವಿರುವ ನವ ಕಾನೂನು ಪದವೀಧರರಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅರ್ಹವಿರುವ ನವ ಕಾನೂನು ಪದವೀಧರರು (ಫಲಾನುಭವಿಗಳು) ಈ ಅಧಿಸೂಚನೆಯಲ್ಲಿ ತಿಳಿಸಿರುವ ಷರತ್ತು ಹಾಗೂ ಸೂಚನೆಗಳನ್ವಯ ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಕೆಳಗೆ ತಿಳಿಸಿದ ಸಂಬಂಧಪಟ್ಟ ತಾಲ್ಲೂಕಿನ ಹಿರಿಯ ನ್ಯಾಯಾಧೀಶರುಗಳ ಮುಖಾಂತರ ದಾಖಲೆ ಪ್ರತಿಗಳೊಂದಿಗೆ ಸ್ವಯಂ ದೃಢೀಕರಿಸಿ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು.

ಅರ್ಜಿಗಳನ್ನು ಸಲ್ಲಿಸಲು ಪ್ರಾರಂಭ ದಿನಾಂಕ ಃ31.07.2017 ಹಾಗೂ ಕಡೆಯ ದಿನಾಂಕಃ 26.08.2017 ಸಂಜೆ 5.00 ಗಂಟೆ.

ಅರ್ಜಿ ಸಲ್ಲಿಸಬೇಕಾದ ವಿಳಾಸಃ1. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಕೊಡಗು-ಮಡಿಕೇರಿ-571201.

2. 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಕೊಡಗು-ಮಡಿಕೇರಿ-571201.
(ಕಾರ್ಯ ನಿರ್ವಹಣೆ-ವಿರಾಜಪೇಟೆ)

3. ಹಿರಿಯ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ,
ಸೋಮವಾರಪೇಟೆ

ಷರತ್ತುಗಳು ಃ

1. ಈ ಯೋಜನೆಯು 2017-18ನೇ ಸಾಲಿನಲ್ಲಿ ಅನುಷ್ಠಾನಗೊಳ್ಳುತ್ತಿದ್ದು ಈ ಯೋಜನೆಯಡಿ ಅರ್ಜಿ ಸಲ್ಲಿಸುವ ಅರ್ಹ ಅಭ್ಯರ್ಥಿಗಳು/ಫಲಾನುಭವಿಗಳು ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನಡಿಯಲ್ಲಿ ದಿಃ 01.06.2016 ರಿಂದ 31.05.2017 ರವರೆಗಿನ ಅವಧಿಯಲ್ಲಿ ವಕೀಲ ವೃತ್ತಿಗೆ ನೊಂದಾಯಿಸಿದವರಿಗೆ ಮಾತ್ರ ಅನ್ವಯವಾಗುವುದು.

2. ಈ ಯೋಜನೆಯಡಿಯಲ್ಲಿ ಪ್ರೋತ್ಸಾಹ ಧನದ ಮೊತ್ತ ಪ್ರತಿ ಮಾಹೆಗೆ ರೂ.2000/- (ರೂ.ಎರಡು ಸಾವಿರ ರೂಪಾಯಿ)ಗಳು ಒಟ್ಟು 24 ತಿಂಗಳುಗಳ ಅವಧಿಗೆ ಸೀಮಿತವಾಗಿರುವುದು.

3. ಸರ್ಕಾರಿ, ಅರೆ ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿ ವಯೋನಿವೃತ್ತಿ, ಕಡ್ಡಾಯ ನಿವೃತ್ತಿ ಮತ್ತು ಸ್ವ-ಇಚ್ಛಾ ನಿವೃತ್ತಿ ಹೊಂದಿದ ನಂತರ ವಕೀಲ ವೃತ್ತಿ ನಡೆಸಲು ಇಚ್ಚಿಸುವ ಕಾನೂನು ಪದವೀಧರರು ಮತ್ತು ಅಂತಹ ಯಾವುದೇ ಸೇವೆಯಿಂದ ತೆಗೆದುಹಾಕಲ್ಪಟ್ಟ ಕಾನೂನು ಪದವೀಧರರು ಪ್ರೋತ್ಸಾಹ ಧನ ಪಡೆಯಲು, ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

4. ಈ ಯೋಜನೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಯ/ಕುಟುಂಬದ ವಾರ್ಷಿಕ ವರಮಾನದ ಮಿತಿಯು ರೂ.40,000/- (ನಲವತ್ತು ಸಾವಿರ ರೂಪಾಯಿಗಳು)ಳನ್ನು ಮೀರತಕ್ಕದ್ದಲ್ಲ.

5. ಇಂತಹದೇ ಸೌಲಭ್ಯವನ್ನು ಈ ಯೋಜನೆ/ಇತರೆ ಯೋಜನೆಯಡಿ ಅಥವಾ ರಾಜ್ಯ ಸರ್ಕಾರದ ಬೇರೆ ಯಾವುದೇ ಇಲಾಖೆಯ ಯೋಜನೆಯಡಿ ಆಯ್ಕೆಗೊಂಡ ಫಲಾನುಭವಿಗಳು ಈ ಯೋಜನೆಯ ಸೌಲಭ್ಯಗಳಿಗೆ ಅರ್ಹರಾಗುವುದಿಲ್ಲ.

6. ಹೊಸದಾಗಿ ವಕೀಲರ ವೃತ್ತಿಯಲ್ಲಿ ತೊಡಗುವ ಕಾನೂನು ಪದವೀಧರರು ರಾಜ್ಯ ಬಾರ್ ಕೌನ್ಸಿಲ್‌ನಲ್ಲಿ ನೊಂದಾಯಿಸಿದ ನಂತರ ಸ್ಥಳೀಯ ವಕೀಲರ ಸಂಘದ ಅಧ್ಯಕ್ಷರಿಂದ ಪ್ರಮಾಣ ಪತ್ರ ಪಡೆದು ಸಂಬಂಧಪಟ್ಟ ಸಮಿತಿಯ ಸಂಬಂಧಿತ ತಾಲ್ಲೂಕಿನ ಹಿರಿಯ ಸಿವಿಲ್ ನ್ಯಾಯಾಧೀಶರುಗಳ ಮುಖಾಂತರ ಮತ್ತು ಜಿಲ್ಲಾ ಹಂತದಲ್ಲಿ ಅರ್ಹ ಕಾನೂನು ಪದವೀಧರರು ನೇರವಾಗಿ ಸಮಿತಿಯ ಅಧ್ಯಕ್ಷರಿಗೆ ವಿಳಾಸಿಸಿ ಅರ್ಜಿ ಸಲ್ಲಿಸತಕ್ಕದ್ದು.

<u>ಸೂಚನೆಗಳು</u> :-

1. ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು.
2. ನಿಗಧಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಅರ್ಜಿಯೊಂದಿಗೆ ಸಂಬಂಧಪಟ್ಟ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸಿ ಫಲಾನುಭವಿಗಳು ಮೇಲೆ ತಿಳಿಸಿದ ಆಯಾ ತಾಲ್ಲೂಕಿನ ಹಿರಿಯ ನ್ಯಾಯಾಧೀಶರ ಮುಖಾಂತರ ಅರ್ಜಿಯನ್ನು ಸಲ್ಲಿಸತಕ್ಕದ್ದು. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
3. ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ದ್ವಿತೀಯ ಪಿ.ಯು.ಸಿ ಅಂಕಪಟ್ಟಿ, ಪದವಿ ಅಂಕಪಟ್ಟಿ, ಕಾನೂನು ಪದವೀಯ ಪ್ರಮಾಣ ಪತ್ರ, ರಾಜ್ಯ ಬಾರ್ ಕೌನ್ಸಿಲಿನ ನೊಂದಣಿ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ವಕೀಲ ವೃತ್ತಿಯಲ್ಲಿ ನಿರ್ವಹಿಸುತ್ತಿರುವ ವಕೀಲರ ಸಂಘದ ಅಧ್ಯಕ್ಷರಿಂದ ಪ್ರಮಾಣ ಪತ್ರವನ್ನು ಪಡೆದು ಎಲ್ಲಾ ದಾಖಲೆಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸಿ ಸಲ್ಲಿಸತಕ್ಕದ್ದು
4. ಇತ್ತೀಚಿನ ಭಾವಚಿತ್ರ ಮತ್ತು ಆಧಾರ್‌ಕಾರ್ಡ್/ಚುನಾವಣಾ ಗುರುತಿನ ಚೀಟಿಯ ಜೆರಾಕ್ಸ್ ಪ್ರತಿಯನ್ನು ಸಲ್ಲಿಸತಕ್ಕದ್ದು.
5. ಫಲಾನುಭವಿಗಳಿಗೆ ಪ್ರೋತ್ಸಾಹಧನ ನೀಡುವ ಸಂಬಂಧ/ಆಯ್ಕೆಯ ಸಂಬಂಧ ಯಾವುದೇ ತೀರ್ಮಾನಗಳು ಜಿಲ್ಲಾ ಹಂತದ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ

ತಮ್ಮ ವಿಶ್ವಾಸಿ

Sd/-

(ಮಾಸ್ಟರ್ ಆರ್‌ಕೆಜಿಎಂಎಂ ಮಹಾಸ್ವಾಮೀಜಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು-ಮಡಿಕೇರಿ.

## ಅನುಬಂಧ-1

## ಕರ್ನಾಟಕ ಸರ್ಕಾರದ ಕಾನೂನು ಇಲಾಖೆಯಡಿಯಲ್ಲಿ

## ನವ ಕಾನೂನು ಪದವೀಧರರಿಗೆ ಪ್ರೋತ್ಸಾಹಧನ ನೀಡುವ ಯೋಜನೆಯ ನಮೂನೆ

| | | |
|---|---|---|
| 1 | ಅರ್ಜಿದಾರರ ಹೆಸರುঃ<br><br>(ಎಸ್‌ಎಸ್‌ಎಲ್‌ಸಿ) ಅಂಕಪಟ್ಟಿಯಲ್ಲಿರುವಂತೆ | |
| 2 | ಅರ್ಜಿದಾರರ ತಂದೆ/ಗಂಡ ಹೆಸರುঃ<br><br>(ಎಸ್‌ಎಸ್‌ಎಲ್‌ಸಿ) ಅಂಕಪಟ್ಟಿಯಲ್ಲಿರುವಂತೆ | |
| 3 | ಹುಟ್ಟಿದ ದಿನಾಂಕঃ<br><br>(ಎಸ್‌ಎಸ್‌ಎಲ್‌ಸಿ) ಅಂಕಪಟ್ಟಿಯಲ್ಲಿರುವಂತೆ | |
| 4 | ವಿಳಾಸঃ ಪ್ರಸ್ತುತঃ<br><br>ಖಾಯಂ ವಿಳಾಸঃ<br><br>ಕಛೇರಿ ವಿಳಾಸঃ | |
| 5 | ವಿವಾಹಿತರೇ? | |
| 6 | ಭಾರತೀಯ ಪ್ರಜೆಯೇ? | |
| 7 | ಧರ್ಮ | |
| 8 | ಜಾತಿ ಮತ್ತು ಪ್ರವರ್ಗ | |

...2

9. ಶೈಕ್ಷಣಿಕ ವಿದ್ಯಾರ್ಹತೆಗಳು:

| ಕ್ರ. ಸಂ. | ಪಾಸಾದ ವಿದ್ಯಾರ್ಹತೆ | ವರ್ಷ | ಶೇಕಡಾ ಅಂಕ | ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು |
|---|---|---|---|---|
| 1 | ಎಸ್.ಎಸ್.ಎಲ್.ಸಿ. (10) | | | |
| 2 | ಪಿ.ಯು.ಸಿ (12) | | | |
| 3 | ಪದವಿ | | | |
| 4 | ಕಾನೂನು ಪದವಿ | | | |
| 10 | ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನಲ್ಲಿ ನೋಂದಾಯಿಸಿದ ಸಂಖ್ಯೆ ಮತ್ತು ದಿನಾಂಕ: (ಸಂಬಂಧಿತ ದಾಖಲೆಯ ಪ್ರತಿ) | | | |
| 11 | ಪ್ರಸ್ತುತ ವಕೀಲ ವೃತ್ತಿ ನಡೆಸುತ್ತಿದ್ದಲ್ಲಿ ವಿವರ: (ಸಂಬಂಧಿತ ದಾಖಲೆಯ ಪ್ರತಿ) | | | |
| 12 | ಇತರೆ ಮಾಹಿತಿ: | | | |

ಮೇಲಿನ ನಮೂನೆಯಲ್ಲಿ ನೀಡಲಾಗಿರುವ ಮಾಹಿತಿಯನ್ನು ನಾನು ಪ್ರಜ್ಞಾಪೂರ್ವಕವಾಗಿ ಸತ್ಯವೆಂದು ಅರಿತು ನೀಡಿರುತ್ತೇನೆ. ಒಂದು ವೇಳೆ ಈ ಮಾಹಿತಿಯಲ್ಲಿ ಯಾವುದೇ ಅಂಶಗಳು ಸತ್ಯಾಂಶದಿಂದ ಕೂಡಿಲ್ಲವೆಂದು ತಿಳಿದು ಬಂದಲ್ಲಿ ಆಯ್ಕೆ ಪ್ರಾಧಿಕಾರವು / ಸರ್ಕಾರವು ನಿಯಮಾನುಸಾರ ನನ್ನ ಮೇಲೆ ಅವಶ್ಯಕ ಕಾನೂನು ಕ್ರಮ ಜರುಗಿಸಬಹುದೆಂದು ನಾನು ಒಪ್ಪಿಗೆಯನ್ನು ಈ ಮೂಲಕ ನೀಡಿರುತ್ತೇನೆ.

ಭಾವಚಿತ್ರ

ಅರ್ಜಿದಾರರ ಸಹಿ

(ಹೆಸರು)